ಸಮೀಕ್ಷೆ ಕಾರ್ಯದ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ. ಆದರೂ ಈಗ ಸರ್ಕಾರವು ಹೊರಡಿಸಿರುವ ಸುತ್ತೋಲೆ ಸಂಖ್ಯೆ: ಎಫ್‌ಸಿಎಸ್ 20 ಡಿಆರ್‌ಎ 97 ದಿನಾಂಕ 15-4-98 ಅನುಸಾರ ಹೊಸ ಕಾರ್ಡುಗಳಿಗಾಗಿ ಅರ್ಜಿ ಸಲ್ಲಿಸಿದ ಎಲ್ಲಾ ಅರ್ಹ ಅರ್ಜಿದಾರರಿಗೆ ಪಡಿತರ ಚೀಟಿಗಳನ್ನು ನೀಡಲಾಗುವುದು.

ವಿಷಯ: ರಾಜ್ಯದಲ್ಲಿರುವ ಸಣ್ಣ ಹಾಗೂ ದೊಡ್ಡ ಕೆರೆಗಳ ಅಭಿವೃದ್ಧಿ.

884 (1385)

ಶ್ರೀ ಕುಂಬ್ಳೆ ಸುಂದರ್‌ರಾವ್ (ಸುರತ್ಕಲ್): ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸಣ್ಣ ಮತ್ತು ದೊಡ್ಡ ಕೆರೆಗಳ ಪಟ್ಟಿಯನ್ನು ಸಿದ್ಧಪಡಿಸಲಾಗಿದೆಯೇ, ಹಾಗಿದ್ದಲ್ಲಿ ಒಟ್ಟು ಕೆರೆಗಳ ಸಂಖ್ಯೆ ಎಷ್ಟು?

ಆ) ಸಮಸ್ಯೆಯಾಗಿ ವೃದ್ಧಿಸುತ್ತಿರುವ ಕುಡಿಯುವ ನೀರು ಹಾಗೂ ಕೃಷಿಗಾಗಿ ನೀರು ಪೂರೈಕೆಯ ಅಕ್ಷಯ ಪಾತ್ರೆಗಳಂತಿದ್ದ ಕೆರೆಗಳ ಅಭಿವೃದ್ಧಿಗಾಗಿ ಸರ್ಕಾರದವರು ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಯಾವುವು?

ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು):

ಅ) ಹೌದು. ಸಣ್ಣ ಮತ್ತು ದೊಡ್ಡ ಕೆರೆಗಳು ಒಟ್ಟು 36679.

ಆ) ಕೆರೆ ಕಲ್ಯಾಣ ಮತ್ತು ಕೆರೆಗಳ ಪುನರುಜ್ಜೀವನ ಶೀರ್ಷಿಕೆಯಲ್ಲಿ ಕೆರೆಗಳ ಅಭಿವೃದ್ಧಿಯನ್ನು ಪ್ರತಿ ವರ್ಷವು ಹಮ್ಮಿಕೊಳ್ಳಲಾಗಿದೆ.

ವಿಷಯ: ಸಚಿವಾಲಯದ ಸಿಬ್ಬಂದಿಗಳನ್ನು ವಿವಿಧ ಇಲಾಖೆಗಳಿಗೆ ನಿಯೋಜಿಸುವುದು.

885 (1493)

ಡಾ. ಎಂ.ಪಿ.ಕರ್ಕಿ (ಕುಮಟಾ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಚಿವಾಲಯದ ಸಿಬ್ಬಂದಿಗಳನ್ನು ಸರ್ಕಾರದ ಇತರೆ ಇಲಾಖೆಗಳಿಗೆ ವರ್ಗಾಯಿಸಲು ಸರ್ಕಾರದವರು ಪರಿಶೀಲಿಸುವರೆ?

ಆ) ವರ್ಗಾಯಿಸದಿದ್ದಲ್ಲಿ ಕಾರಣಗಳೇನು?